Akashvani: Bangalore
National Bulletin In Kannada
12.02.2026 : 13.10hrs

**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

12.02.2026 : 13.10hrs

********

**ಮುಖ್ಯಾಂಶಗಳು**

1. ಲೋಕಸಭೆಯಲ್ಲಿ ಪ್ರತಿಪಕ್ಷ ಸದಸ್ಯರಿಂದ ವಿವಿಧ ವಿಷಯಗಳನ್ನು ಮುಂದಿಟ್ಟುಕೊಂಡು ಗದ್ದಲ ; ಕಲಾಪ ಪ್ರಗತಿಯಲ್ಲಿ
2. ವಿದ್ಯುತ್ ಕೊರತೆಯಿಂದ ವಿದ್ಯುತ್ ಉಳಿತಾಯದ ರಾಷ್ಟ್ರವಾಗಿ ಹೊರಹೊಮ್ಮಿದ ಭಾರತ ; ಕೇಂದ್ರ ವಿದ್ಯುತ್ ರಾಜ್ಯಸಚಿವ ಶ್ರೀಪಾದ್ ಯೆಸ್ಸೊ ನಾಯ್ಕ್
3. ರಾಜ್ಯಸಭೆ ಕಲಾಪ ; ಒಡಿಶಾದಲ್ಲಿ ಜಾತಿ ತಾರತಮ್ಯದ ಕುರಿತು ವಿರೋಧ ಪಕ್ಷದ ನಾಯಕ ಮಲ್ಲಿಕಾರ್ಜುನ ಖರ್ಗೆ ಕಳವಳ
4. ಐರೋಪ್ಯ ಒಕ್ಕೂಟದ ಭವಿಷ್ಯದ ಕಾರ್ಯತಂತ್ರ ರೂಪಿಸಲು ೨೭ ಸದಸ್ಯ ರಾಷ್ಟ್ರಗಳ ನಾಯಕರು ಇಂದು ಬೆಲ್ಜಿಯಂನಲ್ಲಿ ಸಭೆ
5. ಐಸಿಸಿ ಟಿ-೨೦ ವಿಶ್ವಕಪ್ ಕ್ರಿಕೆಟ್ ; ಬಿ ಗುಂಪಿನ ಪಂದ್ಯದಲ್ಲಿ ಓಮನ್‌ಗೆ ೨೨೬ ರನ್‌ಗಳ ಗುರಿ ನೀಡಿದ ಶ್ರೀಲಂಕಾ

*********

ಲೋಕಸಭೆಯಲ್ಲಿಂದು ಪ್ರಶ್ನೋತ್ತರ ಅವಧಿಯಲ್ಲಿ ಕಾಂಗ್ರೆಸ್, ಟಿಎಂಸಿ, ಡಿಎಂಕೆ ಸೇರಿದಂತೆ ವಿರೋಧ ಪಕ್ಷದ ಸದಸ್ಯರು ವಿವಿಧ ವಿಷಯಗಳನ್ನು ಮುಂದಿಟ್ಟುಕೊಂಡು ಘೋಷಣೆಗಳನ್ನು ಕೂಗುತ್ತ ಸದನದ ಬಾವಿಗಿಳಿದು ಅಸಮಾಧಾನ ವ್ಯಕ್ತಪಡಿಸಿದರು. ಪ್ರತಿಪಕ್ಷಗಳ ಗದ್ದಲದ ನಡುವೆಯೇ ಪೀಠಾಸೀನಾಧಿಕಾರಿ ಕೃಷ್ಣ ಪ್ರಸಾದ್ ತೆನ್ನೆತಿ, ಪ್ರಶ್ನೋತ್ತರ ಕಲಾಪ ಕೈಗೆತ್ತಿಕೊಳ್ಳಲು ಪ್ರಯತ್ನಿಸಿದರು. ಈ ವೇಳೆ ವಿದ್ಯುತ್ ಖಾತೆ ರಾಜ್ಯ ಸಚಿವ ಶ್ರೀಪಾದ ಯೆಸ್ಸೊ ನಾಯಕ್ ವಿದ್ಯುತ್ ಕ್ಷೇತ್ರದಲ್ಲಿ ಒಟ್ಟು ತಾಂತ್ರಿಕ ಮತ್ತು ವಾಣಿಜ್ಯ ನಷ್ಟಗಳಿಗೆ ಸಂಬಂಧಿಸಿದ ಪ್ರಶ್ನೆಗೆ ಉತ್ತರಿಸಲು

ಪ್ರಯತ್ನಿಸಿದರು ಆದರೆ ಪ್ರತಿಪಕ್ಷಗಳ ಸದಸ್ಯರು ಕಲಾಪದಲ್ಲಿ ಅಡ್ಡಿ ಉಂಟು ಮಾಡಿದ ಕಾರಣ ಸಚಿವರು ತಮ್ಮ ಉತ್ತರವನ್ನು ಪೂರ್ಣಗೊಳಿಸಲು ಸಾಧ್ಯವಾಗಲಿಲ್ಲ. ಸುಗಮ ಕಲಾಪ ನಡೆಸಲು ಅನುವು ಮಾಡಿಕೊಡುವಂತೆ ಪ್ರತಿಭಟನಾ ನಿರತ ಸದಸ್ಯರಿಗೆ ಸಭಾಪತಿಯವರು ಮನವಿ ಮಾಡಿದರು. ಸದನದೊಳಗೆ ಫಲಕಗಳನ್ನು ತರುವುದು ನಿಯಮಗಳಿಗೆ ವಿರುದ್ಧವಾಗಿದೆ ಎಂದು ಅವರು ಹೇಳಿದರು. ಇದರ ಬೆನ್ನಲ್ಲೂ ವಿರೋಧ ಪಕ್ಷದ ಸದಸ್ಯರು ತಮ್ಮ ಪ್ರತಿಭಟನೆಯನ್ನು ಮುಂದುವರೆಸಿದ ಕಾರಣ ಸದನವನ್ನು ಮಧ್ಯಾಹ್ನ ೧೨ ಗಂಟೆಯವರೆಗೆ ಮುಂದೂಡಲಾಯಿತು. ಬಳಿಕ ಕಲಾಪ ಪುನರಾರಂಭಗೊಂಡಿದೆ.

*********

ಭಾರತವು ವಿದ್ಯುತ್ ಕೊರತೆಯ ದೇಶದಿಂದ ವಿದ್ಯುತ್ ಉಳಿತಾಯದ ದೇಶವಾಗಿ ಹೊರಹೊಮ್ಮಿದೆ ಎಂದು ಕೇಂದ್ರ ವಿದ್ಯುತ್ ಖಾತೆ ರಾಜ್ಯ ಸಚಿವ ಶ್ರೀಪಾದ್ ಯೆಸ್ಸೊ ನಾಯ್ಕ್ ತಿಳಿಸಿದ್ದಾರೆ. ಲೋಕಸಭೆಯಲ್ಲಿ ಇಂದು ಪ್ರಶ್ನೋತ್ತರ ಅವಧಿಯಲ್ಲಿ ಪೂರಕ ಪ್ರಶ್ನೆಗಳಿಗೆ ಉತ್ತರಿಸಿದ ಅವರು, ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ನೇತೃತ್ವದಲ್ಲಿ ೨೦೧೪ರಿಂದ ವಿದ್ಯುತ್ ಕ್ಷೇತ್ರದಲ್ಲಿ ಹಲವು ಸುಧಾರಣೆಗಳನ್ನು ತರಲಾಗಿದೆ. ಇದರ ಪರಿಣಾಮವಾಗಿ ಭಾರತವು ಇಂದು ನೆರೆಯ ರಾಷ್ಟ್ರಗಳಿಗೂ ವಿದ್ಯುತ್ ಪೂರೈಸುವ ಹಂತಕ್ಕೆ ತಲುಪಿದೆ ಎಂದು ಮಾಹಿತಿ ನೀಡಿದರು. ದೇಶದ ಆರ್ಥಿಕತೆಯನ್ನು ಬಲಪಡಿಸುವಲ್ಲಿ ವಿದ್ಯುತ್ ವಲಯವು ಅತ್ಯಂತ ನಿರ್ಣಾಯಕ ಪಾತ್ರ ವಹಿಸುತ್ತಿದೆ ಎಂದು ಅಭಿಪ್ರಾಯಪಟ್ಟ ಸಚಿವರು, ಶೀಘ್ರದಲ್ಲೇ 'ವಿದ್ಯುತ್ ತಿದ್ದುಪಡಿ ಮಸೂದೆ'ಯನ್ನು ಮಂಡಿಸಲಾಗುವುದು ಎಂದು ತಿಳಿಸಿದರು. ಈ ನೂತನ ಮಸೂದೆಯು ವಿದ್ಯುತ್ ವಿತರಣಾ ವಲಯದಲ್ಲಿ ಆರ್ಥಿಕ ಶಿಸ್ತನ್ನು ತರುವ ಮೂಲಕ ವ್ಯವಸ್ಥೆಯನ್ನು ಮತ್ತಷ್ಟು ಸುಧಾರಿಸುವ ಗುರಿಯನ್ನು ಹೊಂದಿದೆ ಎಂದು ಅವರು ವಿವರಿಸಿದರು.

*********

ರಾಜ್ಯಸಭೆಯಲ್ಲಿ ಇಂದಿನ ಕಲಾಪ ಆರಂಭವಾಗುತ್ತಿದ್ದಂತೆ ಶೂನ್ಯವೇಳೆ ಕಲಾಪವನ್ನು ಕೈಗೆತ್ತಿಕೊಳ್ಳಲಾಯಿತು. ಶೂನ್ಯ ವೇಳೆಯಲ್ಲಿ, ಒಡಿಶಾದ ಅಂಗನವಾಡಿ ಕೇಂದ್ರವೊಂದರಲ್ಲಿ ನಡೆದಿದೆ ಎನ್ನಲಾದ ಜಾತಿ ಆಧಾರಿತ ತಾರತಮ್ಯದ ಕುರಿತು ರಾಜ್ಯಸಭೆ ವಿರೋಧಪಕ್ಷದ ನಾಯಕ

ಮಲ್ಲಿಕಾರ್ಜುನ ಖರ್ಗೆ ತೀವ್ರ ಕಳವಳ ವ್ಯಕ್ತಪಡಿಸಿದರು. ಪ್ರಗತಿ ಮತ್ತು ಸುಧಾರಣೆಯ ಮಾತುಗಳ ನಡುವೆ ಇಂತಹ ಪಿಡುಗುಗಳು ಸಮಾಜದಲ್ಲಿ ಜೀವಂತವಾಗಿರುವುದು ದುರಾದೃಷ್ಟಕರ ಎಂದರು. ಜಾತಿ ತಾರತಮ್ಯದ ಘಟನೆಗಳು ಸಾಮಾಜಿಕ ಏಕತೆಗೆ ಮಾರಕವಾಗಿರುತ್ತದೆ. ಮಕ್ಕಳ ದೈಹಿಕ ಮತ್ತು ಬೌದ್ಧಿಕ ಬೆಳವಣಿಗೆಗೆ ಅಂನಗವಾಡಿಗಳು ಅಡಿಪಾಯವಾಗಿದ್ದು, ಇಂತಹ ಬಾಲ್ಯದ ಹಂತದಲ್ಲೇ ಜಾತಿ ತಾರತಮ್ಯ ಮನೆ ಮಾಡಿದರೆ ಅದು ಸಮಾಜದ ಮೇಲೆ ದೀರ್ಘಕಾಲದ ದುಷ್ಪರಿಣಾಮ ಬೀರಲಿದೆ. ಎಲ್ಲ ಸಂಸ್ಥೆಗಳಲ್ಲಿ ಸಮಾನತೆ ಮತ್ತು ಘನತೆ ಎತ್ತಿ ಹಿಡಿಯಲು ಸರ್ಕಾರ ತಕ್ಷಣವೇ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕೆಂದು ಆಗ್ರಹಿಸಿದರು. ಕಲಾಪದ ವೇಳೆ, ರಾಜ್ಯಸಭಾಪತಿ ಸಿ.ಪಿ.ರಾಧಾಕೃಷ್ಣನ್ ಅವರ ಅನುಮತಿಯೊಂದಿಗೆ ಕೇಂದ್ರ ಸಚಿವರು ಹಲವು ವರದಿಗಳನ್ನು ಮಂಡಿಸಿದರು. ಸಂಸದ ಡಾ.ಎಲ್.ಮುರುಗನ್, ಸಾರ್ವಜನಿಕ ಖಾತೆ ಮತ್ತು ಸಾರ್ವಜನಿಕ ಉದ್ಯಮ ಕುರಿತ ಸಮಿತಿಗೆ ಏಳು ಸದಸ್ಯರ ಆಯ್ಕೆಗಾಗಿ ಪ್ರಸ್ತಾವನೆ ಮಂಡಿಸಿದರು. ಈ ಪ್ರಸ್ತಾವನೆಯನ್ನು ಸದನದಲ್ಲಿ ಧ್ವನಿ ಮತದ ಮೂಲಕ ಅಂಗೀಕರಿಸಲಾಯಿತು. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಕಲ್ಯಾಣ ಸಮಿತಿಗೆ ೧೦ ಸದಸ್ಯರ ಆಯ್ಕೆಗಾಗಿ ಪ್ರಸ್ತಾವನೆಯನ್ನು ಸಹ ಸದನದಲ್ಲಿ ಅಂಗೀಕರಿಸಲಾಗಿದೆ. ರಾಜ್ಯಸಭಾಪತಿ ಸಿ.ಪಿ ರಾಧಾಕೃಷ್ಣನ್ ಅವರ ಅನುಮತಿಯೊಂದಿಗೆ ವಿವಿಧ ರಾಜಕೀಯ ಪಕ್ಷಗಳ ಸದಸ್ಯರು ಶೂನ್ಯ ವೇಳೆಯಲ್ಲಿ ತುರ್ತು ಮಹತ್ವದ ವಿಷಯಗಳನ್ನು ಪ್ರಸ್ತಾಪಿಸಿದ್ದಾರೆ.

*********

ವಿವಿಧ ಜಾಗತಿಕ ಸವಾಲುಗಳ ನಡುವೆ ಐರೋಪ್ಯ ಒಕ್ಕೂಟದ ಭವಿಷ್ಯದ ಕಾರ್ಯತಂತ್ರವನ್ನು ರೂಪಿಸಲು ೨೭ ಸದಸ್ಯ ರಾಷ್ಟ್ರಗಳ ನಾಯಕರು ಇಂದು ಬೆಲ್ಜಿಯಂನ ಐತಿಹಾಸಿಕ ಆಲ್ಡೆನ್ ಬಿಸೆನ್ ಕೋಟೆಯಲ್ಲಿ ಸಭೆ ಸೇರಿದ್ದಾರೆ. ಅಮೆರಿಕದ ವ್ಯಾಪಾರ ನೀತಿಗಳು ಚೀನಾದ ಆಕ್ರಮಣಕಾರಿ ಆರ್ಥಿಕ ಧೋರಣೆ ಮತ್ತು ರಷ್ಯಾದಿಂದ ಎದುರಾಗುತ್ತಿರುವ ಸಂಕೀರ್ಣ ಬೆದರಿಕೆಗಳ ಹಿನ್ನೆಲೆಯಲ್ಲಿ ಈ ಸಭೆ ಮಹತ್ವ ಪಡೆದಿದೆ. ಯುರೋಪ್ ತನ್ನ ಹಾದಿಯನ್ನು ಬದಲಿಸಿಕೊಳ್ಳುವ ಅನಿವಾರ್ಯತೆಯಿದೆ ಎಂಧು ಬೆಲ್ಜಿಯಂತ ಪ್ರಧಾನಿ ಬಾರ್ಟ್ ಡಿ ವೀವರ್ ಅಭಿಪ್ರಾಯಪಟ್ಟಿದ್ದು, ಮಾರ್ಚ್ ಅಂತ್ಯದಲ್ಲಿ ನಡೆಯಲಿರುವ ಬೃಹತ್ ಶೃಂಗಸಭೆಗೆ ಈ ಸಭೆ ಅಡಿಪಾಯವಾಗಲಿದೆ.

*********

ರಾಷ್ಟ್ರಪತಿ ದ್ರೌಪದಿ ಮುರ್ಮು, ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಮತ್ತು ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರು ಸ್ವಾಮಿ ದಯಾನಂದ ಸರಸ್ವತಿ ಅವರ ಜನ್ಮದಿನದಂದು ಅವರಿಗೆ ಗೌರವ ನಮನ ಸಲ್ಲಿಸಿದ್ದಾರೆ. ಸಾಮಾಜಿಕ ಜಾಲತಾಣದ ಪೋಸ್ಟ್‌ನಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು, ಸ್ವಾಮಿ ದಯಾನಂದ ಸರಸ್ವತಿಯವರು ಇಡೀ ಸಮಾಜಕ್ಕೆ ಹಾಗೂ ದೇಶದ ಶಿಕ್ಷಣ ವ್ಯವಸ್ಥೆಗೆ ಅಮೂಲ್ಯವಾದ ಮಾರ್ಗದರ್ಶನ ನೀಡಿದ್ದಾರೆ. ಅವರು ಸ್ಥಾಪಿಸಿದ ಆಧ್ಯಾತ್ಮಿಕ ಮತ್ತು ಶಿಕ್ಷಣ ಸಂಸ್ಥೆಗಳಿಂದ ದೇಶವು ಸದಾ ಪ್ರಯೋಜನ ಪಡೆಯುತ್ತಿದೆ ಮತ್ತು ಮುಂದೆಯೂ ಪಡೆಯಲಿದೆ ಎಂದು ತಿಳಿಸಿದ್ದಾರೆ. ಮಹರ್ಷಿ ದಯಾನಂದ ಸರಸ್ವತಿಯವರು ಮೂಢನಂಬಿಕೆ, ಆಡಂಬರ ಮತ್ತು ಸಾಮಾಜಿಕ ಪಿಡುಗುಗಳ ವಿರುದ್ಧದ ಹೋರಾಟಕ್ಕೆ ತಮ್ಮ ಇಡೀ ಜೀವನವನ್ನು ಮುಡುಪಾಗಿಟ್ಟಿದ್ದರು ಎಂದು ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಹೇಳಿದ್ದಾರೆ. ಶಿಕ್ಷಣದ ಪ್ರಸಾರ, ಮಹಿಳಾ ಸಬಲೀಕರಣ ಮತ್ತು ಭಾರತೀಯ ಸಂಸ್ಕೃತಿಯ ಸಂರಕ್ಷಣೆಯಲ್ಲಿ ಅವರ ಪ್ರಯತ್ನಗಳು ದೇಶಕ್ಕೆ ಹೊಸ ಸೈದ್ಧಾಂತಿಕ ದಿಕ್ಕು ಮತ್ತು ಸ್ವಾಭಿಮಾನದ ಭಾವನೆಯನ್ನು ನೀಡಿದೆ ಎಂದು ಅವರು ತಿಳಿಸಿದ್ದಾರೆ. ತಮ್ಮ ಸಂದೇಶದಲ್ಲಿ ಪ್ರಧಾನಿ ನರೇಂದ್ರ ಮೋದಿ, ಸ್ವಾಮಿ ದಯಾನಂದ ಸರಸ್ವತಿಯವರನ್ನು ಸ್ಮರಿಸಿದ್ದು, ಶಿಕ್ಷಣವನ್ನು ಉತ್ತೇಜಿಸುವುದರಲ್ಲಿ ಮಾತ್ರವಲ್ಲದೆ, ಭಾರತೀಯ ಸಂಸ್ಕೃತಿ ಮತ್ತು ಸಂಪ್ರದಾಯವನ್ನು ಶ್ರೀಮಂತಗೊಳಿಸುವಲ್ಲಿಯೂ ಅವರು ಅಸಾಮಾನ್ಯ ಕೊಡುಗೆ ನೀಡಿದ್ದಾರೆ ಎಂದು ಹೇಳಿದ್ದಾರೆ.

*********

ಅಂತಾರಾಷ್ಟ್ರೀಯ ಸಮುದ್ರ ಭದ್ರತೆಯಲ್ಲಿ ಭಾರತದ ಪ್ರಾಬಲ್ಯ ಮತ್ತಷ್ಟು ವಿಸ್ತರಿಸಿದ್ದು, ಸಂಯೋಜಿತ ಕಡಲ ಪಡೆ-ಸಿಎಂಎಫ್‌ನ ಅಡಿಯಲ್ಲಿ ಬರುವ ಬಹುರಾಷ್ಟ್ರೀಯ ತರಬೇತಿ ಕಾರ್ಯಪಡೆಯಾದ ಸಂಯೋಜಿತ ಕಾರ್ಯಪಡೆ ಸಿಟಿಎಫ್ ೧೫೪ರ ಕಮಾಂಡ್‌ಅನ್ನು ಭಾರತೀಯ ನೌಕಾಪಡೆ ಅಧಿಕೃತವಾಗಿ ವಹಿಸಿಕೊಂಡಿದೆ. ಬಹರೇನ್‌ನ ಮನಾಮದಲ್ಲಿರುವ ಸಿಎಂಎಫ್ ಪ್ರಧಾನ ಕಚೇರಿಯಲ್ಲಿ ನಡೆದ ಸಮಾರಂಭದಲ್ಲಿ ಭಾರತೀಯ ನೌಕಾಪಡೆಯ ಕಮೊಡೋರ್ ಶೌರ್ಯ ಚಕ್ರ ಪುರಸ್ಕೃತ ಮಿಲಿಂದ್ ಎಂ.ಮೊಕಾಶಿ, ಇಟಲಿ ನೌಕಾಪಡೆಯ ನಿರ್ಗಮಿತ ಕಮಾಂಡರ್‌ಗಳಿಂದ ಅಧಿಕಾರ ಸ್ವೀಕರಿಸಿದರು ಎಂದು ರಕ್ಷಣಾ ಸಚಿವಾಲಯ ತಿಳಿಸಿದೆ. ನೌಕಾಪಡೆಯ ಉಪ ಮುಖ್ಯಸ್ಥ ವೈಸ್ ಅಡ್ಮಿರಲ್ ತರುಣ್ ಸೋಬ್ತಿ ಹಾಗೂ ಅಮೆರಿಕದ ನೌಕಾ ಅಧಿಕಾರಿಗಳ ಸಮ್ಮುಖದಲ್ಲಿ ಈ

ಪ್ರಕ್ರಿಯೆ ಜರುಗಿತು ಎಂದು ಸಚಿವಾಲಯ ತಿಳಿಸಿದೆ. ಸದಸ್ಯ ರಾಷ್ಟ್ರಗಳ ನೌಕಾ ಸಾಮರ್ಥ್ಯ ವೃದ್ಧಿ ಮತ್ತು ತರಬೇತಿ ನೀಡುವ ಗುರಿ ಹೊಂದಿರುವ ಈ ಕಾರ್ಯಪಡೆಯ ನೇತೃತ್ವವು, ಜಾಗತಿಕ ಮಟ್ಟದಲ್ಲಿ ಭಾರತದ ನೌಕಾ ಪರಿಣಿತಿಗೆ ಸಂದ ಗೌರವವಾಗಿದೆ. ಸಿಎಂಎಫ್ ಒಕ್ಕೂಟದ ೪೭ ರಾಷ್ಟ್ರಗಳ ನಡುವೆ ಭಾರತವು ಇಂದು ಅತ್ಯಂತ ವಿಶ್ವಾಸಾರ್ಹ ಭದ್ರತಾ ಪಾಲುದಾರನಾಗಿ ಗುರುತಿಸಿಕೊಳ್ಳುತ್ತಿರುವುದಕ್ಕೆ ಈ ಬೆಳವಣಿಗೆ ಸಾಕ್ಷಿಯಾಗಿದೆ.

*********

ಪ್ರಧಾನಿ ನರೇಂದ್ರ ಮೋದಿ ಅವರು ನಾಳೆ ಮಧ್ಯಾಹ್ನ ರಾಷ್ಟ್ರ ರಾಜಧಾನಿಯಲ್ಲಿ ಸೇವಾ ತೀರ್ಥ ಕಟ್ಟಡ ಸಂಕೀರ್ಣದ ಹೆಸರನ್ನು ಅನಾವರಣಗೊಳಿಸಲಿದ್ದಾರೆ. ನಂತರ ಪ್ರಧಾನ ಮಂತ್ರಿಗಳು ಸೇವಾ ತೀರ್ಥ ಮತ್ತು ಕರ್ತವ್ಯ ಭವನ -೧ ಮತ್ತು ೨ ಅನ್ನು ಔಪಚಾರಿಕವಾಗಿ ಉದ್ಘಾಟಿಸಲಿದ್ದಾರೆ ಮತ್ತು ಸಂಜೆ ಸೇವಾ ತೀರ್ಥದಲ್ಲಿ ಸಾರ್ವಜನಿಕ ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ಈ ಉದ್ಘಾಟನೆಯು ಆಧುನಿಕ, ದಕ್ಷ, ಪ್ರವೇಶಿಸಬಹುದಾದ ಮತ್ತು ನಾಗರಿಕ ಕೇಂದ್ರಿತ ಆಡಳಿತ ಪರಿಸರ ವ್ಯವಸ್ಥೆಯನ್ನು ನಿರ್ಮಿಸುವ ಪ್ರಧಾನಿ ನರೇಂದ್ರ ಮೋದಿಯವರ ಬದ್ಧತೆಯನ್ನು ಪ್ರತಿಬಿಂಬಿಸುತ್ತದೆ. ಸೇವಾ ತೀರ್ಥವು ಪ್ರಧಾನ ಮಂತ್ರಿ ಕಚೇರಿ, ರಾಷ್ಟ್ರೀಯ ಭದ್ರತಾ ಮಂಡಳಿ ಸಚಿವಾಲಯ, ಕ್ಯಾಬಿನೆಟ್ ಸಚಿವಾಲಯವನ್ನು ಹೊಂದಿದೆ, ಇವೆಲ್ಲವೂ ಹಿಂದೆ ವಿವಿಧ ಸ್ಥಳಗಳಲ್ಲಿ ನೆಲೆಗೊಂಡಿದ್ದವು. ಹೊಸ ಕಟ್ಟಡ ಸಂಕೀರ್ಣಗಳು ಆಧುನಿಕ ಮತ್ತು ಭವಿಷ್ಯಕ್ಕೆ ಸಿದ್ಧವಾಗಿರುವ ಸೌಲಭ್ಯಗಳಲ್ಲಿ ಆಡಳಿತಾತ್ಮಕ ಕಾರ್ಯಗಳನ್ನು ಒಟ್ಟುಗೂಡಿಸುತ್ತವೆ. ಕರ್ತವ್ಯ ಭವನ -೧ ಮತ್ತು ೨ ಹಣಕಾಸು ಸಚಿವಾಲಯ, ರಕ್ಷಣಾ ಸಚಿವಾಲಯ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯ, ಶಿಕ್ಷಣ ಸಚಿವಾಲಯ ಮತ್ತು ಮಾಹಿತಿ ಮತ್ತು ಪ್ರಸಾರ ಸಚಿವಾಲಯ ಸೇರಿದಂತೆ ಹಲವಾರು ಪ್ರಮುಖ ಸಚಿವಾಲಯಗಳನ್ನು ಒಳಗೊಂಡಿದೆ.

*********

ಪಲ್ಲೆಕೆಲೆ ಅಂತಾರಾಷ್ಟ್ರೀಯ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ಐಸಿಸಿ ಪುರುಷರ ಟಿ-೨೦ ಕ್ರಿಕೆಟ್ ವಿಶ್ವಕಪ್‌ನ ಇಂದಿನ ಮೊದಲ ಪಂದ್ಯದಲ್ಲಿ ಶ್ರೀಲಂಕಾ ಮತ್ತು ಓಮನ್ ತಂಡಗಳು ಮುಖಾಮುಖಿಯಾಗಿವೆ. ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿ ಶ್ರೀಲಂಕಾ ತಂಡ

ಓಮನ್‌ಗೆ ೨೨೬ ರನ್‌ಗಳ ಗುರಿ ನೀಡಿದೆ. ಶ್ರೀಲಂಕಾ ನಿಗದಿತ ೨೦ ಓವರ್‌ಗಳಲ್ಲಿ ೫ ವಿಕೆಟ್ ನಷ್ಟಕ್ಕೆ ೨೨೫ ರನ್ ಗಳಿಸಿತು. ಪ್ರತ್ಯುತ್ತರವಾಗಿ ೨೨೬ ರನ್‌ಗಳ ಗುರಿ ಬೆನ್ನತ್ತಿರುವ ಓಮನ್ ತಂಡ ಇತ್ತೀಚಿನ ವರದಿ ಬಂದಾಗ ೨ ಓವರ್‌ಗಳಲ್ಲಿ  ೨ ವಿಕೆಟ್ ನಷ್ಟಕ್ಕೆ ೧೫ ರನ್ ಗಳಿಸಿ ಆಡುತ್ತಿದೆ. ಇಂದು ಮಧ್ಯಾಹ್ನ ೩ ಗಂಟೆಗೆ ಮುಂಬೈನ ವಾಂಖೆಡೆ ಕ್ರೀಡಾಂಗಣದಲ್ಲಿ ಆರಂಭವಾಗಲಿರುವ ದಿನದ ಎರಡನೇ ಪಂದ್ಯದಲ್ಲಿ ನೇಪಾಳ ತಂಡವು, ಇಟಲಿಯನ್ನು ಎದುರಿಸಲಿದೆ. ದೆಹಲಿಯ ಅರುಣ್ ಜೇಟ್ಲಿ ಕ್ರೀಡಾಂಗಣದಲ್ಲಿ ನಡೆಯಲಿರುವ ದಿನದ ಮೂರನೇ ಪಂದ್ಯದಲ್ಲಿ ಭಾರತ ತಂಡ, ನಮೀಬಿಯಾವನ್ನು ಎದುರಿಸಲಿದೆ. ಈ ಪಂದ್ಯವು ಇಂದು ಸಂಜೆ ೭ ಗಂಟೆಗೆ ಆರಂಭವಾಗಲಿದೆ.

****END****